# Bangalore
# Regional News
# 13.07.2024 / 18.40 hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ರಾಜ್ಯದಲ್ಲಿ ಬಾಲ್ಯವಿವಾಹದ ವಿರುದ್ಧ ಕಠಿಣಕ್ರಮ ; ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್

೨. ಕಾವೇರಿ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸುವ ವಿಚಾರ ; ನಾಳೆ ಬೆಂಗಳೂರಿನಲ್ಲಿ ಸರ್ವಪಕ್ಷ ಸಭೆ

೩. ಒಂದನೇ ತರಗತಿ ಪ್ರವೇಶಕ್ಕೆ ಗರಿಷ್ಠ ವಯೋಮಿತಿ ೮ ವರ್ಷಕ್ಕೆ ಹೆಚ್ಚಿಸಿ ಶಿಕ್ಷಣ ಇಲಾಖೆ ಆದೇಶ

೪. ಮೂಡಾ ನಿವೇಶನ ಹಂಚಿಕೆ ಪ್ರಕರಣ ; ನ್ಯಾಯಾಲಯದ ಮೂಲಕ ತಾರ್ಕಿಕ ಅಂತ್ಯ ನೀಡುವಂತೆ ಕೇಂದ್ರ ಸಚಿವ ಕುಮಾರಸ್ವಾಮಿ ಸಲಹೆ

**<><*<><>*><>**

ಬಾಲ್ಯವಿವಾಹದ ವಿರುದ್ಧ ಕಠಿಣಕ್ರಮ ಕೈಗೊಳ್ಳಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಮಾತನಾಡಿದ ಅವರು, ಬಾಲ್ಯ ವಿವಾಹದಲ್ಲಿ ಕರ್ನಾಟಕ ದೇಶದಲ್ಲೇ ೨ನೇ ಸ್ಥಾನದಲ್ಲಿರುವ ಬಗ್ಗೆ ಕೇಂದ್ರ ಸರ್ಕಾರ ಸುಪ್ರೀಂಕೋರ್ಟ್‌ಗೆ ಮಾಹಿತಿ ನೀಡಿದೆ. ಇದು ದುರದೃಷ್ಟಕರ ಎಂದ ಅವರು, ಬಾಲ್ಯ ವಿವಾಹವನ್ನು ತಳಮಟ್ಟದಿಂದ ಹೋಗಲಾಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದಕ್ಕೂ ಮೊದಲು ಕರಾವಳಿ ಲೇಖಕಿಯರ ಮತ್ತು ವಾಚಕಿಯರ ಸಂಘದ ನವೀಕೃತ ಸಾಹಿತ್ಯ ಸದನದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ದಕ್ಷಿಣಕನ್ನಡ ಜಿಲ್ಲೆಗೆ ೧೦ ಸರಕಾರಿ ಮಾಂಟೆಸೆರಿಗಳು ಸೇರಿದಂತೆ ೨೫ ಅಂಗನವಾಡಿಗಳನ್ನು ಮಂಜೂರು ಮಾಡುವುದಾಗಿ ಘೋಷಣೆ ಮಾಡಿದ್ದಾರೆ. ಅಂಗನವಾಡಿ ಎನ್ನುವುದು ೫೦ ವರ್ಷದ ಹಿಂದಿನ ಹೆಸರಾಗಿದ್ದು, ಅವುಗಳನ್ನು ಇನ್ನು ಮುಂದೆ ಸರ್ಕಾರಿ ಮಾಂಟೆಸೆರಿ ಎಂದು ಕರೆಯಲಾಗುವುದು ಎಂದು ತಿಳಿಸಿದರು.

**<><*<><>*><>**

ತಮಿಳುನಾಡಿಗೆ ನಿತ್ಯ ಒಂದು ಟಿಎಂಸಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣಾ ಸಮಿತಿ ಶಿಫಾರಸ್ಸು ಮಾಡಿದ ಹಿನ್ನೆಲೆಯಲ್ಲಿ ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ವಪಕ್ಷ ಸಭೆ ಕರೆದಿದ್ದಾರೆ. ಸಭೆಯಲ್ಲಿ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸುವ ಕುರಿತಂತೆ ಚರ್ಚೆ ನಡೆಯಲಿದೆ. ಕೇಂದ್ರ ಸಚಿವರು ಕಾವೇರಿ ಭಾಗದ ಲೋಕಸಭೆ, ರಾಜ್ಯಸಭೆ ಸದಸ್ಯರು ಹಾಗೂ ಶಾಸಕರನ್ನು ಸಭೆಗೆ ಆಹ್ವಾನಿಸಲಾಗಿದೆ. ಕಾವೇರಿ ಜಲಾನಯನ ಪ್ರದೇಶದ ಎಲ್ಲಾ ೪ ಜಲಾಶಯಗಳಲ್ಲಿ ಕೇವಲ ೬೦ ಟಿಎಂಸಿ ನೀರು ಲಭ್ಯವಿದ್ದು, ರಾಜ್ಯ ಸರ್ಕಾರ ಕೃಷಿ ಚಟುವಟಿಕೆಗಳಿಗೂ ನೀರು ಒದಗಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ ತಮಿಳುನಾಡಿಗೆ ಕಾವೇರಿ ನೀರು ಹರಿಸದಿರಲು ತೀರ್ಮಾನಿಸಿದೆ.

**<><*<><>*><>**

ಒಂದನೇ ತರಗತಿ ಪ್ರವೇಶಕ್ಕೆ ಇದ್ದ ಗರಿಷ್ಠ ವಯೋಮಿತಿಯನ್ನು ೮ ವರ್ಷಕ್ಕೆ ಹೆಚ್ಚಿಸಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಆದೇಶ ಹೊರಡಿಸಿದ್ದು, ಈ ನಿಯಮ ೨೦೨೫-೨೬ನೇ ಸಾಲಿನಿಂದ ಅನ್ವಯವಾಗಲಿದೆ. ಮುಂದಿನ ಶೈಕ್ಷಣಿಕ ವರ್ಷದಿಂದ ೧ನೇ ತರಗತಿಗೆ ಪ್ರವೇಶ ಪಡೆಯುವ ಮಕ್ಕಳ ಕನಿಷ್ಠ ವಯೋಮಿತಿಯನ್ನು ೬ ವರ್ಷಗಳಿಗೆ ಕಡ್ಡಾಯಗೊಳಿಸಿರುವ ಹಿನ್ನೆಲೆಯಲ್ಲಿ ಗರಿಷ್ಠ ವಯೋಮಿತಿಯನ್ನು ಹೆಚ್ಚಳ ಮಾಡಲಾಗಿದೆ. ಕಡ್ಡಾಯ ಶಿಕ್ಷಣ ಕಾಯ್ದೆಗೆ ಅನುಗುಣವಾಗಿ ಮಕ್ಕಳ ದಾಖಲಾತಿಯ ಕನಿಷ್ಠ ಮತ್ತು ಗರಿಷ್ಠ ವಯೋಮಿತಿಯನ್ನು ಹೆಚ್ಚಳ ಮಾಡಿರುವುದರಿಂದ ಶಾಲೆ ತೊರೆಯುವ ಮಕ್ಕಳ ಸಂಖ್ಯೆ ಗಣನೀಯವಾಗಿ ತಗ್ಗಿಸಲು ಸಹಾಯವಾಗಲಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಸ್ಪಷ್ಟಪಡಿಸಿದೆ.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿಂದು ಕಾಂಗ್ರೆಸ್ ಕಾರ್ಯಕರ್ತರ ಅಹವಾಲು ಸ್ವೀಕಾರ ಅಭಿಯಾನಕ್ಕೆ ಚಾಲನೆ ನೀಡಿದರು. ರಾಜ್ಯಾದ್ಯಂತ ವಿವಿಧೆಡೆಯಿಂದ ಆಗಮಿಸಿರುವ ಕಾರ್ಯಕರ್ತರು ತಮ್ಮ ಅಹವಾಲುಗಳನ್ನು ಸಲ್ಲಿಸಿದರು. ಹಲವು ವಿಶೇಷಚೇತನರ ಬಳಿ ತೆರಳಿದ ಮುಖ್ಯಮಂತ್ರಿ, ಅವರಿಂದ ಮನವಿ ಸ್ವೀಕರಿಸಿ, ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದೇ ವೇಳೆ ಮನೆ ಇಲ್ಲದ ಬಡ ಮಹಿಳೆಯರಿಗೆ ಮನೆಗಳನ್ನು ಒದಗಿಸುವಂತೆ ರಾಜೀವ್ ಗಾಂಧಿ ವಸತಿ ನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದರು.

<><*<><>*><>

ಕೆಎಂಎಫ್‌ನಲ್ಲಿರುವ ಸಾಫ್ಟ್‌ವೇರ್ ಬದಲಿಸಿ ಹಾಲು ಉತ್ಪಾದಕರಿಗೆ ಅನುಕೂಲವಾದ ಕನ್ನಡ ಸಾಫ್ಟ್‌ವೇರ್ ಅಳವಡಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮೈಸೂರಿನ ಹಾಲು ಉತ್ಪಾದಕರ ಸಹಕಾರ ಸಂಘದ ಎಸ್. ಶಿವನಾಗಪ್ಪ ಮನವಿ ಸಲ್ಲಿಸಿದರು. ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕೆಎಂಎಫ್ ನಿರ್ದೇಶಕರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ಹಾಲು ಉತ್ಪಾದಕರ ಸ್ನೇಹಿ ಸಾಫ್ಟ್‌ವೇರ್ ಅಳವಡಿಸುವಂತೆ ಸೂಚನೆ ನೀಡಿದರು. ಇದೇ ವೇಳೆ ಹುಬ್ಬಳ್ಳಿ-ಧಾರವಾಡದಲ್ಲಿ ಬೀದಿಬದಿ ವ್ಯಾಪಾರಿಗಳಿಗೆ ಅನಗತ್ಯ ತೊಂದರೆ ಕೊಡದಂತೆ ಧಾರವಾಡ ಜಿಲ್ಲಾಧಿಕಾರಿಗೆ ಸೂಚನೆ ನೀಡಿದರು.

<><*<><>*><>

ಡೆಂಘಿ ನಿಯಂತ್ರಣಕ್ಕಾಗಿ ಜಿಲ್ಲೆಯಾದ್ಯಂತ ನಿರಂತರವಾಗಿ ಲಾರ್ವಾ ಸಮೀಕ್ಷೆ ನಡೆಸಿ, ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಸೊಳ್ಳೆ ನಿಯಂತ್ರಣಕ್ಕೆ ಹಾಗೂ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.  ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಆವರಣದಲ್ಲಿ ೫೦ ಆಟೋಗಳ ಮೂಲಕ ಡೆಂಘಿ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಅಭಿಯಾನಕ್ಕೆ ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಚಾಲನೆ ನೀಡಿದರು.

<><*<><>*><>

ಮೈಸೂರಿನ ಮೂಡಾ ಹಗರಣ ಸಂಬಂಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ರಾಜ್ಯಪಾಲರ ಬಳಿ ನಿಯೋಗ ಕೊಂಡೊಯ್ದು ತಾರ್ಕಿಕ ಅಂತ್ಯ ನೀಡಬೇಕಾಗಿದೆ ಎಂದು ಕೇಂದ್ರ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ೧೮೭ ಕೋಟಿ ರೂಪಾಯಿ ಅವ್ಯವಹಾರ ನಡೆದಿದೆ ಎಂದು ಆರೋಪಿಸಿದರು. ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆಯನ್ನಾಗಿ ಬದಲಾಯಿಸುವ ರಾಜ್ಯ ಸರ್ಕಾರದ ಕ್ರಮಕ್ಕೆ ಕುಮಾರಸ್ವಾಮಿ ವಿರೋಧ ವ್ಯಕ್ತಪಡಿಸಿದರು. ಇದೇ ವೇಳೆ ಕಾವೇರಿ ನದಿನೀರು ಹಂಚಿಕೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ನಾಳೆ ಕರೆದಿರುವ ಸರ್ವಪಕ್ಷಗಳ ಸಭೆಗೆ ತಮಗೆ ಇದುವರೆಗೆ ಆಹ್ವಾನ ಬಂದಿಲ್ಲ ಎಂದು ತಿಳಿಸಿದ್ದಾರೆ.

<><*<><>*><>

ವಾಲ್ಮೀಕಿ ಅಭಿವೃದ್ಧಿ ನಿಗಮ ಹಾಗೂ ಮೂಡಾ ಹಗರಣ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸಿದ್ದರಾಮಯ್ಯ ಸರ್ಕಾರ ಹೈಕಮಾಂಡ್ ಬೆಂಬಲದಿಂದ ಭ್ರಷ್ಟಾಚಾರ ನಡೆಸಿದೆ ಎಂದು ಆರೋಪಿಸಿದ್ದಾರೆ. ರಾಜ್ಯದಲ್ಲಿರುವುದು ಭ್ರಷ್ಟ ಸರ್ಕಾರ ಎಂದು ವಾಗ್ದಾಳಿ ನಡೆಸಿದ್ದಾರೆ.

<><*<><>*><>

೬ ರಿಂದ ೧೬ ವರ್ಷ ವಯಸ್ಸಿನ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಶಾಲೆಗೆ ದಾಖಲು ಮಾಡುವ ಪ್ರಕ್ರಿಯೆ ಇದೇ ೧೫ ರಿಂದ ೩೧ ರವರೆಗೆ ಮನೆ-ಮನೆ ಸಮೀಕ್ಷೆ ವಿಶೇಷ ಅಭಿಯಾನದ ಮೂಲಕ ಹಮ್ಮಿಕೊಳ್ಳಲಾಗಿದೆ. ಸಮೀಕ್ಷೆಯಲ್ಲಿ ಯಾರಾದರೂ ಶಾಲೆಯಿಂದ ಹೊರಗುಳಿದ ಮಕ್ಕಳು ಕಂಡು ಬಂದಲ್ಲಿ ಅವರಿಗೆ ಶಾಲೆಗಳಿಗೆ ಮರು ದಾಖಲಾತಿ ಮಾಡಿಕೊಳ್ಳಲಾಗುವುದು ಎಂದು ತುಮಕೂರು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗದಂತೆ ನೋಡಿಕೊಳ್ಳಲು ಈ ಸಮೀಕ್ಷೆ ನೆರವಾಗಲಿದೆ ಎಂದು ಹೇಳಿದ್ದಾರೆ.

<><*<><>*><>

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಇಂದು ಕಲಬುರಗಿ ಹೈಕೋರ್ಟ್ ಪೀಠದಲ್ಲಿ ಜನತಾ ಅದಾಲತ್ ನಡೆಯಿತು. ಪರಸ್ಪರ ರಾಜಿ ಸಂಧಾನದ ಮೂಲಕ ೫೨೦ ಪ್ರಕರಣ ವಿಲೇವಾರಿ ಮಾಡಿ ೧೪ ಕೋಟಿ ೭೧ ಸಾವಿರದ ೩೦೫ ರೂಪಾಯಿ ಪರಿಹಾರ ವಿತರಣೆಗೆ ಜನತಾ ನ್ಯಾಯಾಲಯ ಆದೇಶಿಸಿದೆ. ಹೈಕೋರ್ಟ್ ಕಾನೂನು ಸೇವಾ ಸಮಿತಿಯಿಂದ ಆಯೋಜಿಸಿದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಮೋಟಾರು ವಾಹನ ವಿಮೆ ಮತ್ತು ಸಿವಿಲ್ ಪ್ರಕರಣಗಳನ್ನು ಅರ್ಜಿದಾರ, ಪ್ರತಿವಾದಿಗಳು ಹಾಗೂ ವಕೀಲರ ಸಮಕ್ಷಮ ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಪಡಿಸಲಾಯಿತು. ಲೋಕ ಅದಾಲತ್‌ನಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ನ್ಯಾ. ಅಶೋಕ ಎಸ್.ಕಿಣಗಿ, ನ್ಯಾ.ಉಮೇಶ್ ಎಂ.ಅಡಿಗ ಹಾಗೂ ನ್ಯಾ.ರಾಜೇಶ್ ರೈ.ಕೆ ಭಾಗವಹಿಸಿದ್ದರು.

<><*<><>*><>

ಜಗತ್ ವಿಖ್ಯಾತಿ ಗೋಲಗುಂಬಜ್‌ಗೆ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಭೇಟಿ ನೀಡಿ ಪ್ರವಾಸಿಗರ ಅನುಕೂಲಕ್ಕಾಗಿ ಕಲ್ಪಿಸಲಾಗಿರುವ ಮೂಲಭೂತ ಸೌಲಭ್ಯಗಳು ಹಾಗೂ ಗುಂಬಜ್‌ಗೆ ದೀಪಾಲಂಕಾರ ವ್ಯವಸ್ಥೆ ಕುರಿತು ಪರಿಶೀಲನೆ ನಡೆಸಿದರು. ಆಗಸ್ಟ್ ಮಧ್ಯಾವಧಿಯವರೆಗೆ ದೀಪಾಲಂಕಾರಗೊಳಿಸುವಂತೆ ಹಾಗೂ ಗೋಲಗುಂಬಜ್ ಹಿಂದೆ ಖಾಲಿ ಇರುವ ೧೦ ಎಕರೆ ಜಾಗದಲ್ಲಿ ಗಿಡಗಳನ್ನು ನೆಟ್ಟು ಹಸಿರೀಕರಣ ಮಾಡಬೇಕು ಹಾಗೂ ಪ್ರವಾಸಿಗರಿಗೆ ಯಾವುದೇ ತೊಂದರೆಯಾಗದಂತೆ ನಿರ್ವಹಣೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ವಿಜಯಪುರ ಜಿಲ್ಲೆಯ ಆಲಮಟ್ಟಿಯ ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯದಿಂದ ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯಕ್ಕೆ ೩ ಸಾವಿರ ಕ್ಯೂಸೆಕ್‌ನ? ಒಳಹರಿವು ಇದೆ ಎಂದು ಕೆಬಿಜೆಎನ್‌ಎಲ್ ಅಧಿಕಾರಿಗಳು ತಿಳಿಸಿದ್ದಾರೆ.

೨. ಜನತಾ ನ್ಯಾಯಾಲಯದಲ್ಲಿ ಪ್ರಕರಣಗಳು ಶೀಘ್ರವಾಗಿ ವಿಲೇವಾರಿಯಾಗುತ್ತಿದ್ದು, ನ್ಯಾಯಾಲಯದ ತೀರ್ಪು ಅಂತಿಮವಾಗಿದ್ದು, ಯಾವುದೇ ನ್ಯಾಯಾಲಯದಲ್ಲಿ ತೀರ್ಪನ್ನು ಪ್ರಶ್ನಿಸುವ ಅವಕಾಶವಿಲ್ಲ ಎಂದು ಕೋಲಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜಿ. ಎ. ಮಂಜುನಾಥ್ ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ನೈಋತ್ಯ ಮಾನ್ಸೂನ್ ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಸಕ್ರಿಯವಾಗಿದ್ದು, ಅಂಕೋಲಾ, ಕುಮುಟಾ, ಕದ್ರಾ, ಗೇರುಸೊಪ್ಪ, ಹೊನ್ನಾವರ, ಕಾರ್ಕಳ, ಭಾಗಮಂಡಲದಲ್ಲಿ ತಲ ೧೩ ಸೆಂಟಿ ಮೀಟರ್ ಮಳೆಯಾಗಿದೆ. ಮಂಗಳೂರು ವಿಮಾನ ನಿಲ್ದಾಣ, ಪಣಂಬೂರು, ಕುಂದಾಪುರ, ಕೊಟ್ಟಿಗೆಹಾರದಲ್ಲಿ ತಲಾ ೧೧ ಸೆಂಟಿಮೀಟರ್ ಮಳೆಯಾಗಿದೆ. ಮುಂದಿನ ೫ ದಿನಗಳ ಕಾಲ ಕರ್ನಾಟಕ, ಕೊಂಕಣ, ಗೋವಾ, ಮಹಾರಾಷ್ಟ್ರದಲ್ಲಿ ಧಾರಾಕಾರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕರಾವಳಿ ಕರ್ನಾಟಕದ ಉತ್ತರಕನ್ನಡ, ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಗಾಳಿಯೊಂದಿಗೆ ಭಾರೀ

ಮಳೆಯಾಗುವ ಸಾಧ್ಯತೆಯಿದೆ. ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಚಿಕ್ಕಬಳ್ಳಾಪುರ, ದಾವಣಗೆರೆ, ಕೋಲಾರ, ಮಂಡ್ಯ, ರಾಮನಗರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ., ಬೆಂಗಳೂರು ಮತ್ತು ಸುತ್ತಮುತ್ತ ಮೋಡ ಕವಿದ ವಾತಾವರಣ. ಹಗರುದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ. ಗರಿಷ್ಠ ೨೯, ಕನಿಷ್ಠ ೨೧ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**